## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ರಾಮ್‌ಕುಮಾರ್ ಹೆಚ್., ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಹೊಳಲ್ಕೆರೆ, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧದ ಶಿಸ್ತು ಕ್ರಮ

ಓದಲಾಗಿದೆ: 1. ಕಾರಣ ಕೇಳುವ ನೋಟೀಸು ಸಂಖ್ಯೆ: ಗ್ರಾಅಪ/125/ವಿಸೇಬಿ/2013 ದಿನಾಂಕ:22-04-2014.
2. ಶ್ರೀ ರಾಮ್‌ಕುಮಾರ್ ಹೆಚ್, ಇವರ ಲಿಖಿತ ಹೇಳಿಕೆ ದಿ:12-05-2014.

------

ಪ್ರಸ್ತಾವನೆ:

ಶ್ರೀ ರಾಮ್‌ಕುಮಾರ್ ಹೆಚ್, ಇವರು ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿಯಾಗಿ, ತಾಲ್ಲೂಕು ಪಂಚಾಯತ್, ಹೊಳಲ್ಕೆರೆ, ಚಿತ್ರದುರ್ಗ ಜಿಲ್ಲೆ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿದರೆನ್ನಲಾದ ಈ ಕೆಳಕಂಡ ಕರ್ತವ್ಯಲೋಪ ಆಪಾದನೆಗಳಿಗೆ ಸಂಬಂಧಿಸಿದಂತೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ), ನಿಯುಮಾವಳಿಗಳು 1957ರ ನಿಯಮ 12(1) (ಎ) ರಡಿಯಲ್ಲಿ ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಕಾರಣ ಕೇಳುವ ನೋಟೀಸಿನೊಂದಿಗೆ ಆರೋಪ ಪಟ್ಟಿಯನ್ನು ಜಾರಿ ಮಾಡಲಾಗಿತ್ತು. :-

2013-14ನೇ ಸಾಲಿನಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಪ್ರಗತಿ ಪರಿಶೀಲಿಸಿದಾಗ ಜುಲೈ 15ನೇ ತಾರೀಖಿನವರೆಗೆ ಶೂನ್ಯ ಮಾನವ ದಿನಗಳು ಎಂ.ಐ.ಎಸ್.ನಲ್ಲಿ ಕಂಡುಬಂದಿರುತ್ತದೆ. ಜಿಲ್ಲಾ ಪಂಚಾಯತಿಯಿಂದ ಮೇಲಾಧಿಕಾರಿಗಳು ಇವರನ್ನು ಸಂಪರ್ಕಿಸಲು ಪ್ರಯತ್ನಸಿದಾಗ ಮೊಬೈಲನ್ನು ಸ್ವಿಚ್‌ಆಫ್ ಮಾಡಿ ಸರ್ಕಾರಿ ಕೆಲಸ ಕಾರ್ಯಗಳಿಗೆ ಮಾಹಿತಿ ಪಡೆಯಲು ಅಡಚಣೆ ಉಂಟು ಮಾಡಿರುತ್ತಾರೆ. ವಿವಿಧ ವಸತಿ ಯೋಜನೆಗಳಾದ ಆಶ್ರಯ, ಇಂದಿರಾ ಆವಾಸ್, ರಾಜೀವ್‌ಗಾಂಧಿ ವಸತಿ ಯೋಜನೆ ಇತ್ಯಾದಿ ಸೇರಿದಂತೆ ಸರ್ಕಾರದ ನಿಗದಿತ ಗುರಿ ಸಾಧನೆ ಮಾಡುವಲ್ಲಿ ವಿಫಲರಾಗಿರುತ್ತಾರೆ. ಹೀಗಾಗಿ ವಸತಿ ಯೋಜನೆಯಡಿ ಪ್ರಗತಿ ಶೂನ್ಯವಾಗಿರುತ್ತದೆ. ಮೇಲಾಧಿಕಾರಿಗಳು ಸೂಚಿಸಿದಂತಹ ಯಾವುದೇ ಕೆಲಸಗಳನ್ನು ಕಾಲ ಕಾಲಕ್ಕೆ ಸಮರ್ಪಕವಾಗಿ ನಿರ್ವಹಿಸದೇ ಮೇಲೆ ತಿಳಿಸಿದ ಎಲ್ಲಾ ಯೋಜನೆಗಳ ಪ್ರಗತಿ ಕುಂಠಿತಗೊಳ್ಳಲು ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಕಾರಣರಾಗಿರುತ್ತಾರೆ. ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಹೊಳಲ್ಕೆರೆ ತಾಲ್ಲೂಕಿನಲ್ಲಿ ಶೂನ್ಯ ಪ್ರಗತಿ ಆಗಿರುವುದರಿಂದ ಈಗಾಗಲೇ ಇವರಿಗೆ ರೂ.1000/- ದಂಡ ವಿಧಿಸಲಾಗಿತ್ತು. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಚಿತ್ರದುರ್ಗ ಇವರ ಪತ್ರ ಸಂಖ್ಯೆ ಜಿಪಂ/ಆ(9)/ಮಗಾರಾಗ್ರಾಉಕಾ/ಸಿಆರ್- /2013-14, ದಿನಾಂಕ:05-07-2013 ರಲ್ಲಿ ಇವರಿಗೆ ಕಾರಣ ಕೇಳಿ ನೋಟೀಸ್ ಜಾರಿ ಮಾಡಲಾಗಿದ್ದು, ಈ ಬಗ್ಗೆ ಇವರು ಯಾವುದೇ ಸಮಜಾಯಿಷಿ ಸಲ್ಲಿಸಿರುವುದಿಲ್ಲ. ಮೇಲಾಧಿಕಾರಿಗಳ ನಿರ್ದೇಶನವನ್ನು ಉಲ್ಲಂಘನೆ ಮಾಡಿರುತ್ತಾರೆ. ಹಾಗೂ ದಿನಾಂಕ: 13-08-2013 ರಂದು ನಿರ್ದೇಶಕರು, ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, ಇವರು ಟಿ.ನುಲೇನೂರು ಗ್ರಾಮ ಪಂಚಾಯತಿಗೆ ಭೇಟಿ ನೀಡಿ, ಕ್ಷೇತ್ರ ವೀಕ್ಷಣೆ ನಡೆಸಿದಾಗ ಕಾಮಗಾರಿಗಳ ಅನುಷ್ಠಾನದಲ್ಲಿ ಹಾಗೂ ಕಡತಗಳ ನಿರ್ವಹಣೆಯಲ್ಲಿ ಸಾಕಷ್ಟು ಲೋಪದೋಷ ವಾಗಿರುವುದು ಕಂಡು ಬಂದಿದ್ದುದರಿಂದ ಸಹಾಯಕ ಇಂಜಿನೀಯರ್ ರವರನ್ನು ಅಮಾನತ್ತುಪಡಿಸುವಂತೆ ಸೂಚಿಸಿರುತ್ತಾರೆ. ಆಪಾದಿತರು ತಮ್ಮ ತಾಲ್ಲೂಕಿನ ಗ್ರಾಮ ಪಂಚಾಯತಿಗಳಿಗೆ ನಿಯಮಿತವಾಗಿ ಭೇಟಿ ನೀಡಿ, ಕಾಮಗಾರಿ ಹಾಗೂ ದಾಖಲೆಗಳನ್ನು ಪರಿಶೀಲನೆ ನಡೆಸಿದ್ದರೆ ಇಂತಹ ಯಾವುದೇ ಲೋಪದೋಷ ಉಂಟಾಗುತ್ತಿರಲಿಲ್ಲ. ಇವರ ಉದಾಸೀನತೆ, ಕರ್ತವ್ಯ /ನಿರ್ಲಕ್ಷವಹಿಸಿ ಕಡತಗಳನ್ನು ಗ್ರಾಮ ಪಂಚಾಯತಿಗಳಲ್ಲಿ ಸಮರ್ಪಕವಾಗಿ ನಿರ್ವಹಿಸದೆ ಇರುವುದು ಕಂಡುಬಂದಿರುತ್ತದೆ. ತಾಲ್ಲೂಕಿನ 2013-14ನೇ ಸಾಲಿನ ಜೂನ್ 2013ರ ಮಾಹೆಯ ಅಂತ್ಯಕ್ಕೆ ಗ್ರಾಮ ಪಂಚಾಯತಿ ಕಂದಾಯ ವಸೂಲಾತಿ ಪ್ರಗತಿ ಪರಿಶೀಲಿಸಿದಾಗ ಗ್ರಾಮ ಪಂಚಾಯತಿ ತೆರಿಗೆ ಒಟ್ಟು ಬೇಡಿಕೆ 243.04 ಲಕ್ಷಗಳು

ಇದ್ದು, ವಸೂಲಾತಿ ಕೇವಲ 9.69 ಲಕ್ಷಗಳು ಇದ್ದು, ಒಟ್ಟು ಬಾಕಿ 233.35 ಲಕ್ಷಗಳು ಇರುತ್ತವೆ ಹಾಗೂ ನೀರಿನ ಕರ ವಸೂಲಾತಿ ಪರಿಶೀಲಿಸಿದಾಗ ಒಟ್ಟು ಬೇಡಿಕೆ 109.20 ಲಕ್ಷಗಳು ಇದ್ದು, ಒಟ್ಟು ವಸೂಲಾತಿ 6.49 ಲಕ್ಷಗಳಾಗಿರುತ್ತದೆ ಒಟ್ಟು ಬಾಕಿ 102.71 ಲಕ್ಷಗಳು ಇರುತ್ತದೆ. ಈ ಜಿಲ್ಲೆಯ ಇತರೆ ತಾಲ್ಲೂಕುಗಳಿಗೆ ಹೋಲಿಸಿದಾಗ ಈ ತಾಲ್ಲೂಕಿನ ಪ್ರಗತಿ ಕುಂಠಿತವಾಗಲು ಇವರು ನೇರ ಕಾರಣರಾಗಿರುತ್ತಾರೆ. ಅಲ್ಲದೆ ದಿನಾಂಕ: 06-07-2013 ರಂದು ಮೇಲಾಧಿಕಾರಿಗಳ ಪೂರ್ವಾನುಮತಿ ಪಡೆಯದೆ ಕೇಂದ್ರಸ್ಥಾನ ಬಿಟ್ಟಿರುತ್ತಾರೆ. ಇದರಿಂದಾಗಿ ಹೊಳಲ್ಕೆರೆ ತಾಲ್ಲೂಕಿನಲ್ಲಿ ಮೇಲೆ ತಿಳಿಸಿದಂತೆ ವಿವಿಧ ಯೋಜನೆಗಳಡಿ ಪ್ರಗತಿ ಕುಂಠಿತವಾಗಲು ಶ್ರೀ ರಾಮ್‌ಕುಮಾರ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ., ತಾಲ್ಲೂಕು ಪಂಚಾಯತಿ, ಹೊಳಲ್ಕೆರೆ ಇವರು ನೇರವಾಗಿ ಕಾರಣರಾಗಿದ್ದು, ಸರ್ಕಾರಿ ನೌಕರರಿಗೆ ತರವಲ್ಲದ ರೀತಿ ವರ್ತಿಸಿ, ಕರ್ನಾಟಕ ನಾಗರೀಕ ಸೇವಾ (ನಡತೆಗಳು) ನಿಯಮ 1966ರ ನಿಯಮ 3(1) ನ್ನು ಉಲ್ಲಂಘಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ಪತ್ರದಲ್ಲಿ ಶ್ರೀ ರಾಮ್‌ಕುಮಾರ್ ಹೆಚ್., ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ; ತಾಲ್ಲೂಕು ಪಂಚಾಯತ್, ಹೊಳಲ್ಕೆರೆ, ಚಿತ್ರದುರ್ಗ ಜಿಲ್ಲೆ ಇವರು ತಮ್ಮ ಮೇಲೆ ಮಾಡಲಾದ ಆರೋಪಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಲಿಖಿತ ಹೇಳಿಕೆ ನೀಡಿ ತಮ್ಮ ಮೇಲಿನ ಆರೋಪಗಳನ್ನು ಕೈಬಿಡುವಂತೆ ಕೋರಿರುತ್ತಾರೆ

2013-14ನೇ ಸಾಲಿನಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಪ್ರಗತಿ ಪರಿಶೀಲಿಸಿದಾಗ ಜುಲೈ 2003 ರ ವರೆಗೆ ಶೂನ್ಯ ಮಾನವ ದಿನಗಳು ಎಂ.ಐ.ಎಸ್.ನಲ್ಲಿ ದಾಖಲಾಗಿರುವ ಬಗ್ಗೆ ಆ ಅವಧಿಯಲ್ಲಿ ಮಾನವ ದಿನಗಳ ಬೇಡಿಕೆ ಇಲ್ಲದಿರುವುದರಿಂದ ಶೂನ್ಯವಾಗಿರುತ್ತದೆ ಎಂದು ಹಾಗೂ ಈ ಬಗ್ಗೆ ನಂತರದ ದಿನಗಳಲ್ಲಿ ಪಿಡಿಓ /ಕಾರ್ಯದರ್ಶಿಗಳಿಗೆ ಹಲವಾರು ಬಾರಿ ಪ್ರಗತಿ ಪರಿಶೀಲಿಸಿ ಮಾನವ ದಿನಗಳ ಸೃಜನೆ ಬಗ್ಗೆ ಕ್ರಮ ಕೈಗೊಳ್ಳಲು ಸೂಚಿಸಿರುವುದಾಗಿ, ತಾವು ಉದ್ದೇಶ ಪೂರ್ವಕವಾಗಿ ಮೊಬೈಲ್ ಸ್ವಿಚ್ ಆಫ್ ಮಾಡಿರುವುದಿಲ್ಲವೆಂದು, ವಿವಿಧ ವಸತಿ ಯೋಜನೆಗಳಲ್ಲಿ ಗುರಿ ಸಾಧನೆ ಮಾಡುವ ಬಗ್ಗೆ ಎಲ್ಲಾ ಪಿಡಿಓ/ಕಾರ್ಯದರ್ಶಿಗಳಿಗೆ ನಿರ್ದೇಶನ ನೀಡಿರುವುದಾಗಿ, ಹಾಗೂ ಪ್ರಗತಿಯನ್ನು ಹಿಂದಿನ ಸಾಲಿಗಿಂತ ಉತ್ತಮ ಪ್ರಗತಿ ಸಾಧಿಸಲು ಕ್ರಮ ವಹಿಸಿರುವುದಾಗಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,ಜಿಲ್ಲಾ ಪಂಚಾಯತಿ, ಚಿತ್ರದುರ್ಗ ಇವರ ದಿನಾಂಕ: 05-07-2013 ರ ನೋಟೀಸಿಗೆ ಕಾರ್ಯಭಾರದ ಒತ್ತಡದಿಂದ ಸಮಜಾಯಿಷಿ ನೀಡಿರುವುದಿಲ್ಲವೆಂದು, ಉದ್ದೇಶಪೂರ್ವಕವಾಗಿ ಉತ್ತರ ನೀಡದೇ ಉದಾಸೀನ ಮಾಡಿರುವುದಿಲ್ಲವೆಂದು, ತಾಲ್ಲೂಕು ಪಂಚಾಯತಿಯ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ ಯೋಜನೆಗಳ ಕಡತಗಳನ್ನು ಪರಿಶೀಲಿಸಿ ಅದರಲ್ಲಿನ ಲೋಪದೋಷಗಳನ್ನು ಸರಿಪಡಿಸಿಕೊಳ್ಳಲು ಸಂಬಂಧಿಸಿದ ಪಿಡಿಓ/ಕಾರ್ಯದರ್ಶಿಗಳಿಗೆ ಪ್ರತಿ ತಿಂಗಳು 2 ರಿಂದ 3 ಸಭೆಗಳನ್ನು ಮಾಡಿ ಮಾರ್ಗದರ್ಶನ ಮಾಡಿರುವುದಾಗಿ, ಅದರಲ್ಲಿಯೂ ಕೆಲವು ಪಂಚಾಯತಿಗಳಲ್ಲಿ ಕಡತಗಳ ಲೋಪದೋಷಗಳಿದ್ದಲ್ಲಿ ಪಿಡಿಓ/ಕಾರ್ಯದರ್ಶಿ ಹೊಣೆಗಾರರಾಗಿರುತ್ತಾರೆಂದು, 2013-14 ನೇ ಸಾಲಿನ ಜೂನ್ 2013 ಅಂತ್ಯಕ್ಕೆ ಗ್ರಾಮ ಪಂಚಾಯತಿ ಕಂದಾಯ ವಸೂಲಾತಿ ಪ್ರಗತಿ ಕುಂಠಿತವಾಗಿದ್ದು, ನಂತರದ ದಿನಗಳಲ್ಲಿ ಪ್ರಗತಿಯನ್ನು ಪರಿಶೀಲಿಸಿ ಪಿಡಿಓ/ಕಾರ್ಯದರ್ಶಿ/ಕರವಸೂಲಿದಾರರಿಗೆ ಕ್ರಮ ವಹಿಸಲು ಸೂಚಿಸಿರುವುದಾಗಿ ತಿಳಿಸುತ್ತಾ, ತಮ್ಮ ವಿರುದ್ಧದ ಆರೋಪಗಳು ಸತ್ಯಕ್ಕೆ ದೂರವಾಗಿದ್ದು, ಆಪಾದನೆಗಳನ್ನು ಕೈಬಿಡಲು ಕೋರಿರುತ್ತಾರೆ.

ಆಪಾದಿತ ಅಧಿಕಾರಿಯು ಸಲ್ಲಿಸಿರುವ ದಿನಾಂಕ 12-05-2014ರ ಲಿಖಿತ ಹೇಳಿಕೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಆಪಾದಿತ ಅಧಿಕಾರಿಯು ತಮ್ಮ ವಿರುದ್ಧದ ದೋಷಾರೋಪಣೆಗಳಿಗೆ ನೀಡಿರುವ ಸಮಜಾಯಿಷಿಯನ್ನು ಒಪ್ಪಲು ಸಮಂಜಸವಿಲ್ಲವೆಂದು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 125 ವಿಸೇಬಿ 2013 ಬೆಂಗಳೂರು, ದಿನಾಂಕ:28-04-2015.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಶ್ರೀ ರಾಮ್‌ಕುಮಾರ್ ಹೆಚ್., ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಹೊಳಲ್ಕೆರೆ, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧ ದಿನಾಂಕ: 22-4-2014 ರ ನೋಟೀಸಿನಲ್ಲಿ ಜಾರಿಗೊಳಿಸಿದ ಆರೋಪಗಳಿಗೆ ಸಂಬಂಧಿಸಿದಂತೆ ಅಧಿಕಾರಿಯು ಎಸಗಿರುವ ಕರ್ತವ್ಯಲೋಪಕ್ಕೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(iii) ರನ್ವಯ, ಒಂದು ವಾರ್ಷಿಕ ವೇತನ ಬಡ್ತಿಯನ್ನು ಎರಡು ವರ್ಷಗಳ ಅವಧಿಗೆ ಸಂಚಿತ ಪರಿಣಾಮವಿಲ್ಲದೆ (Without cumulative effect) ತಡೆಹಿಡಿಯುವ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ. ಹನುಮಂತಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,(ಸೇ.ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ.
4) ಸರ್ಕಾರದ ಅಧೀನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು.
5) ಸಂಬಂಧಿಸಿದ ಅಧಿಕಾರಿಗೆ.(ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ ರವರ ಮುಖಾಂತರ)
6) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಕಾರ್ಯದರ್ಶಿ (ಪಂ.ರಾಜ್) /ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
7) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
8) ಮಾಹಿತಿ ಕೇಂದ್ರ / ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.

GO